## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 07 ಗ್ರಾನೀಸ(4) 2014

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:07.01.2014

## ಸುತ್ತೋಲೆ

**ವಿಷಯ:** ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಮತ್ತು ನೈರ್ಮಲ್ಯ ಕಾಪಾಡಲು ಕೈಗೊಳ್ಳಬೇಕಾಗಿರುವ ಮುಂಜಾಗ್ರತಾ ಕ್ರಮಗಳ ಕುರಿತು.

**ಉಲ್ಲೇಖ:**
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ/15/ಗ್ರಾನೀಸ(3)/2009, ದಿ:23.03.2009.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ/67/ಗ್ರಾನೀಸ(4)/2010, ದಿ:6/8.10.2010.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ/67/ಗ್ರಾನೀಸ(4)/2010, ದಿ:05.02.2011.
4. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ/79/ಗ್ರಾನೀಸ(4)/2013, ದಿ:22.04.2013.

---

ಗ್ರಾಮೀಣ ಪ್ರದೇಶಗಳಲ್ಲಿನ ಜನ-ಜಾನುವಾರುಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಮೊದಲ ಆದ್ಯತೆಯಲ್ಲಿ ಮಾಡಬೇಕಾಗಿದ್ದು, ಬೇಸಿಗೆ ಕಾಲದಲ್ಲಿ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟ ಇಳಿಮುಖವಾಗುವುದು ಮತ್ತು ಜಲಮೂಲಗಳ ಸುತ್ತಮುತ್ತಲಿನ ಪರಿಸರ ಮಾಲಿನ್ಯದಿಂದ ಕುಡಿಯುವ ನೀರು ಕಲುಷಿತಗೊಂಡು ರೋಗರುಜಿನಗಳು ಹರಡುವ ಸಾಧ್ಯತೆಯಿದ್ದು, ವಿದ್ಯುತ್ ಪೂರೈಕೆ ವ್ಯತಯ ಹಾಗೂ ಅಸಮರ್ಪಕ ನಿರ್ವಹಣೆಯಿಂದ ಗ್ರಾಮೀಣ ಜನವಸತಿಗಳಿಗೆ ಕುಡಿಯುವ ನೀರು ಪೂರೈಕೆ ವ್ಯವಸ್ಥೆಯಲ್ಲಿ ವ್ಯತಯವಾಗುವ ಸಂಭವವಿದೆ. ಇಂತಹ ಸ್ಸಂದರ್ಭಗಳಲ್ಲಿ ಎಲ್ಲಾ ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳು ಸರ್ಕಾರದ ಮೇಲ್ಕಂಡ ಉಲ್ಲೇಖಿತ ಸುತ್ತೋಲೆಗಳಲ್ಲಿ ತಿಳಿಸಿದಂತೆ ಆದ್ಯತಾ ಕ್ರಮಗಳನ್ನು ಕೈಗೊಳ್ಳಲು ಮತ್ತೊಮ್ಮೆ ನಿರ್ದೇಶಿಸಿದೆ. ಹಾಗೂ ಈ ಕೆಳಕಂಡ ಆದ್ಯತಾ / ಮುಂಜಾಗ್ರತಾ ಪರಿಕ್ರಮಗಳನ್ನು ಅನುಸರಿಸಲು ಸೂಚಿಸಿದೆ.

**ಕುಡಿಯುವ ನೀರು:**

- ಈಗಾಗಲೇ ಸರ್ಕಾರದಿಂದ ಬಿಡುಗಡೆ ಮಾಡಿರುವ ಅನುದಾನದಿಂದ, ಬೇಸಿಗೆ ಕಾಲದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳು ಉಲ್ಬಣಿಸದಂತೆ ನೋಡಿಕೊಳ್ಳಲು ಹೈಡ್ರೋಫ್ರ್ಯಾಕ್ಚರಿಂಗ್, ಡೀಪನಿಂಗ್, ಫ್ಲಷಿಂಗ್ ಮತ್ತು ತೀವ್ರ ಅನಿವಾರ್ಯವಿದ್ದಲ್ಲಿ ಮಾತ್ರ ಹೊಸ ಬೋರ್‌ವೆಲ್ ಕೊರೆಯುವುದು ಹಾಗೂ ಖಾಸಗಿ ಬೋರ್‌ವೆಲ್‌ಗಳ ಸೇವೆಯನ್ನು ಪಡೆಯುವ ಪರಿಕ್ರಮಗಳನ್ನು ಅಳವಡಿಸಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗದಂತೆ ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ವಹಿಸತಕ್ಕದ್ದು.
- ತೀವ್ರ ಸಮಸ್ಯೆಯಿರುವ ಜನವಸತಿಗಳಲ್ಲಿ ಜಿಲ್ಲಾಧಿಕಾರಿಗಳ ಸಮನ್ವಯದೊಂದಿಗೆ ಸಾಗಾಣಿಕೆ ಮುಖೇನ ಕುಡಿಯುವ ನೀರು ಪೂರೈಕೆ ವ್ಯವಸ್ಥೆ ಮಾಡಬೇಕು. ಕಂಟ್ರೋಲ್ ರೂಂಗಳಲ್ಲಿ ಸ್ವೀಕೃತಿಯಾಗಿರುವ ದೂರುಗಳಿಗೆ ಕ್ಷಿಪ್ರವಾಗಿ ಸ್ಪಂದಿಸಿ, 24 ಗಂಟೆಯೊಳಗೆ ಪರಿಹಾರ ಒದಗಿಸಲು ಜರೂರಾಗಿ ಅಗತ್ಯ ಕ್ರಮ ಕೈಗೊಳ್ಳಬೇಕು.
- ಚಾಲ್ತಿ ಮಾರ್ಗಸೂಚಿಗಳನ್ವಯ ತುರ್ತು ಕ್ರಿಯಾ ಯೋಜನೆಯನ್ನು ಕುಡಿಯುವ ನೀರಿನ ಸಮಸ್ಯೆಗಳ ಕ್ಷಿಪ್ರ ಪರಿಹಾರ ಸಲುವಾಗಿ ಸಿದ್ಧಪಡಿಸಿ, ಜಿಲ್ಲಾ ಮಟ್ಟದಲ್ಲಿ ಅನುಮೋದಿಸಿಕೊಂಡು, **CE/PRED** ಮತ್ತು ಸರ್ಕಾರಕ್ಕೆ ಕಳುಹಿಸಬೇಕು.
- ದುರಸ್ಥಿ ಕಾಮಗಾರಿಗಳು, ಪುನಶ್ಚೇತನ ಕಾಮಗಾರಿಗಳು, ಪೈಪ್‌ಲೈನ್ ದುರಸ್ಥಿ / ವಿಸ್ತರಣೆ ಮತ್ತು ಪಂಪು ಮೋಟಾರ್ ಅಳವಡಿಕೆ ಹಾಗೂ ಇತರೆ ತುರ್ತು ಕಾಮಗಾರಿಗಳನ್ನು **SDRF / NDRF**ನಡಿ ಕೈಗೊಳ್ಳಲು ಜಿಲ್ಲಾಧಿಕಾರಿಗಳೊಂದಿಗೆ ನಿರಂತರ ಸಮನ್ವಯ ಹೊಂದಿರಬೇಕು.
- ಸಿವಿಲ್ ಕಾಮಗಾರಿಗಳು ಪೂರ್ಣಗೊಂಡಿದ್ದು, ವಿದ್ಯುದ್ದೀಕರಣ ಸಲುವಾಗಿ ಬಾಕಿ ಇರುವ ಯೋಜನೆಗಳನ್ನು ಕುರಿತು ಸಂಬಂಧಪಟ್ಟ **KPTCL / ESCOM**ಗಳೊಂದಿಗೆ ನಿರಂತರ ಸಂಪರ್ಕವಿಟ್ಟುಕೊಂಡು ಯೋಜನೆಗಳನ್ನು ತುರ್ತಾಗಿ ಕಾರ್ಯಗತಗೊಳಿಸಿ, ಸಾರ್ವಜನಿಕ ಉಪಯೋಗಕ್ಕಾಗಿ ಲಭ್ಯವಾಗುವಂತೆ ಕ್ರಮ ವಹಿಸಬೇಕು.
- ಕುಡಿಯುವ ನೀರಿನ ಗುಣಮಟ್ಟದ ಕಾಲಕಾಲಿಕ ಪರೀಕ್ಷೆಯನ್ನು ಈಗಾಗಲೇ ಗ್ರಾಮ ಪಂಚಾಯತಿಗಳಿಗೆ ಪೂರೈಸಿರುವ **FTK**ಗಳ ಮುಖೇನ ನಡೆಸಬೇಕು. ನೀರಿನ ಗುಣಮಟ್ಟದ ಸಮಸ್ಯೆಯಿದ್ದಲ್ಲಿ ಶುದ್ಧ ಕುಡಿಯುವ ನೀರಿನ ಪೂರೈಕೆಗಾಗಿ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು.

...2

ನೈರ್ಮಲ್ಯ:

- ಕುಡಿಯುವ ನೀರಿನ ಯೋಜನೆಗಳ ಘಟಕ (ಸಿಸ್ಟರ್ನ್‌ಗಳು, OHTಗಳು ಮತ್ತು ಎಲ್ಲಾ ರೀತಿಯ ಜಲ ಸಂಗ್ರಹಾರಗಳು)ಗಳನ್ನು 2014ರ ಜನವರಿ ಅಂತ್ಯದೊಳಗೆ ಸ್ವಚ್ಛಗೊಳಿಸತಕ್ಕದ್ದು.
- ರಸ್ತೆ, ಚರಂಡಿ ಮತ್ತು ಇತರೆ ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛಗೊಳಿಸುವುದು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಸೋಂಕು ಹರಡದಂತೆ, ಅಂಟು ಜಾಡ್ಯ ನಿವಾರಣಾ ಔಷಧಿಯನ್ನು **(Disinfection)** ಸಿಂಪಡಿಸುವುದು.
- ಕುಡಿಯುವ ನೀರಿನ ಸ್ಥಾವರಗಳಿಗೆ ಕ್ಲೋರಿನೇಷನ್ ಮಾಡುವುದು. ಜಲಮೂಲಗಳ ಮತ್ತು ನೀರು ಸಂಗ್ರಹಾಗಾರಗಳ ಬಳಿ ಹಾಗೂ ಚರಂಡಿಗಳಲ್ಲಿ ನೀರು ನಿಲ್ಲದಂತೆ ಸರಾಗವಾಗಿ ಹರಿದು ಹೋಗುವಂತೆ ಕ್ರಮ ವಹಿಸುವುದು.
- ಕುಡಿಯುವ ನೀರಿನ ಜಲಮೂಲಗಳ ಬಳಿ ತಿಪ್ಪೆಗುಂಡಿ ಹಾಗೂ ಕಸದ ರಾಶಿ ಹಾಕದಂತೆ ಕಠಿಣ ಕ್ರಮ ಕೈಗೊಳ್ಳಬೇಕು. ಯಾವುದೇ ಕಾರಣಕ್ಕೂ ಕುಡಿಯುವ ನೀರು ಕಲುಷಿತವಾಗದಂತೆ ಎಲ್ಲಾ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು.
- ಎಲ್ಲಾ ಜನವಸತಿಗಳಲ್ಲಿ ಶುದ್ಧ ಕುಡಿಯುವ ನೀರಿನ ಸೇವನೆ ಮತ್ತು ನೈರ್ಮಲ್ಯ ಬಾಬ್ತಿಗೆ ಸಂಬಂಧಿಸಿದಂತೆ ಜನಜಾಗೃತಿ ಮೂಡಿಸುವುದು ಮತ್ತು ಆರೋಗ್ಯ ಇಲಾಖೆ ಸಹಯೋಗದಲ್ಲಿ ಕ್ಲೋರಿನೇಷನ್ ಗುಳಿಗೆಗಳನ್ನು ವಿತರಿಸುವುದು. ಹಾಗೂ ಸ್ಥಳೀಯ ಆರೋಗ್ಯ ಕಾರ್ಯಕರ್ತೆಯರು / ಆಶಾ ಕಾರ್ಯಕರ್ತೆಯರ ಮುಖೇನ ನಿಗದಿತ ಆರೋಗ್ಯ ತಪಾಸಣೆ ಮೂಲಕ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು.
- ಜಲಮೂಲಗಳ ಮತ್ತು ನೀರು ಸಂಗ್ರಹಾರಗಳ ಹಾಗೂ ಸಾರ್ವಜನಿಕ ನಳಗಳ ಸಮೀಪದಲ್ಲಿ ಪಾತ್ರೆ ತೊಳೆಯುವುದು, ಜಾನುವಾರುಗಳನ್ನು ಸ್ವಚ್ಛಗೊಳಿಸುವುದು ಮತ್ತು ಬಟ್ಟೆ ಒಗೆಯುವುದು ಇತ್ಯಾದಿಗಳನ್ನು ಕಡ್ಡಾಯವಾಗಿ ನಿರ್ಬಂಧಿಸಬೇಕು.
- ಗ್ರಾಮೀಣ ಪ್ರದೇಶಗಳಲ್ಲಿನ ಜನವಸತಿಗಳಲ್ಲಿ ಬಯಲು ಮಲ ವಿಸರ್ಜನೆಯನ್ನು ಸಂಪೂರ್ಣವಾಗಿ ನಿಷೇಧಿಸಬೇಕು ಮತ್ತು ಕಡ್ಡಾಯವಾಗಿ ಮನೆಗಳಲ್ಲಿ ಶೌಚಾಲಯ ನಿರ್ಮಾಣ ಮಾಡಿಕೊಳ್ಳಲು ಪ್ರೇರೇಪಿಸಬೇಕು.

ಮೇಲ್ಕಂಡ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪ್ರತಿವಾರ ಸಭೆ ನಡೆಸಿ, ಕುಡಿಯುವ ನೀರು ಪೂರೈಕೆ ಮತ್ತು ನೈರ್ಮಲ್ಯ ಸಂಬಂಧ ವಸ್ತುಸ್ಥಿತಿ ಅವಲೋಕಿಸಿ, ಸ್ಥಳೀಯ ಅಗತ್ಯತೆಯನ್ವಯ ಸೂಕ್ತ ಕ್ರಮ ಕೈಗೊಳ್ಳಬೇಕು ಮತ್ತು ಕೈಗೊಂಡ ಕ್ರಮಗಳ ಕುರಿತು ಪ್ರತಿ ಶುಕ್ರವಾರ ಅನುಪಾಲನಾ ವರದಿಯ ಮಾಹಿತಿಯನ್ನು ಸರ್ಕಾರಕ್ಕೆ ಇ-ಮೇಲ್ ಮುಖೇನ ಕಳುಹಿಸಬೇಕು.

(ನವೀನ್ ರಾಜ್ ಸಿಂಗ್)
ಆಯುಕ್ತರು (SWSM) ಹಾಗೂ
ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ರಾಜ್ಯ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರುಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು-09 ಇವರ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಕೋರಿ ಕಳುಹಿಸಿದೆ.
3. ರಾಜ್ಯದ ಎಲ್ಲಾ (30) ಜಿಲ್ಲೆಗಳ ಜಿಲ್ಲಾಧಿಕಾರಿಗಳು.
4. ರಾಜ್ಯದ ಎಲ್ಲಾ (8) ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜನಿಯರಿಂಗ್ ವೃತ್ತಗಳು.
5. ರಾಜ್ಯದ ಎಲ್ಲಾ (38) ಕಾರ್ಯಪಾಲಕ ಇಂಜಿನಿಯರ್‌ಗಳು, ಪಂಚಾಯತ್ ರಾಜ್ ಇಂಜನಿಯರಿಂಗ್ ವಿಭಾಗಗಳು.
6. ರಾಜ್ಯದ ಎಲ್ಲಾ (176) ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು.

ಪ್ರತಿ:

1. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-560001 ರವರ ಮಾಹಿತಿಗಾಗಿ.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-560001 ರವರ ಮಾಹಿತಿಗಾಗಿ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು.
4. ವ್ಯವಸ್ಥಾಪಕ ನಿರ್ದೇಶಕರು, KPTCL, ಕಾವೇರಿ ಭವನ, ಬೆಂಗಳೂರು-560009.
5. ವ್ಯವಸ್ಥಾಪಕ ನಿರ್ದೇಶಕರು, ESCOM, BESCOM, CHESCOM, HESCOM ಮತ್ತು MESCOM .
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು / ಆಯುಕ್ತರು, SWSM ಮತ್ತು ಸರ್ಕಾರದ ಪದನಿಮಿತ್ತ ಕಾರ್ಯದರ್ಶಿಗಳು ಹಾಗೂ ಗ್ರಾಅಪ. ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು, ಆಂತರಿಕ ಆರ್ಥಿಕ ಸಲಹೆಗಾರರು ಇವರ ಆಪ್ತ ಕಾರ್ಯದರ್ಶಿಗಳು / ಆಪ್ತ ಸಹಾಯಕರುಗಳು.
7. ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ, (DMC) ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಅಪರ ನಿರ್ದೇಶಕರು /ಆರ್ಥಿಕ / ಕಾರ್ಯಚರಣೆ, SWSM ಕಾವೇರಿ ಭವನ, ಬೆಂಗಳೂರು-9
9. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.